ಬ್ಯಾರೇಜ್‌ಗಳ ನಿರ್ಮಾಣಕ್ಕಾಗಿ ಗುರುತಿಸಿದ್ದ ಸ್ಥಳಗಳಲ್ಲಿನ ಕಾಮಗಾರಿಗಳು

387(252) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಜಲ ಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ತುಂಗಭದ್ರಾ ನದಿಗೆ ಬ್ಯಾರೇಜ್‌ಗಳ ನಿರ್ಮಾಣಕ್ಕಾಗಿ ಸರ್ಕಾರ ಗುರುತಿಸಿದ್ದ ಸ್ಥಳಗಳಲ್ಲಿ ಬ್ಯಾರೇಜ್ ನಿರ್ಮಿಸುವ ಕಾಮಗಾರಿ ಪ್ರಾರಂಭಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಬ್ಯಾರೇಜ್ ನಿರ್ಮಾಣದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಯಿತು;

(ಇ) ಹಾಗಿದ್ದಲ್ಲಿ ಬ್ಯಾರೇಜ್ ನಿರ್ಮಾಣದ ಕಾಮಗಾರಿಯು ಈಗ ಯಾವ ಹಂತದಲ್ಲಿದೆ.

(ಈ) 2010–11ನೇ ಸಾಲಿನಲ್ಲಿ ಈ ಬ್ಯಾರೇಜ್‌ಗಳ ನಿರ್ಮಾಣಕ್ಕಾಗಿ ನಿದಗಿಪಡಿಸಿದ್ದ ಹಾಗೂ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು

(ಉ) ಈ ಬ್ಯಾರೇಜ್‌ಗಳ ಕಾಮಗಾರಿಯನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು (ಹೆಸರು ವಿಳಾಸ ಪೂರ್ಣ ವಿವರಗಳನ್ನು ನೀಡುವುದು)?

ಶ್ರೀಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

(ಅ), (ಆ),(ಇ) ತುಂಗಭದ್ರಾ ನದಿಗೆ ಸಮತೋಲನಾ ಬ್ಯಾರೇಜ್‌ಗಳ ನಿರ್ಮಾಣಕ್ಕಾಗಿ ಕೆಲವು ಸ್ಥಳಗಳನ್ನು ಗುರುತಿಸಲಾಗಿದ್ದು, ಕೃಷ್ಣಾ ಕಣಿವೆಯ ನ್ಯಾಯಾಧೀಕರಣ ತೀರ್ಪಿನ ಕುರಿತಂತೆ ಸಂಬಂಧಿತ ರಾಜ್ಯಗಳ ಮೇಲ್ಮನವಿ ಅರ್ಜಿ ಹಾಗೂ ಮರುಪರಿಶೀಲನಾ ಅರ್ಜಿಗಳು ಪರಿಶೀಲನೆಯಲ್ಲಿರುವುದರಿಂದ ಈ ಕುರಿತಂತೆ ಯಾವ ಕ್ರಮವನ್ನು ಕೈಗೊಂಡಿರುವುದಿಲ್ಲ.

(ಆ) ಕಾಮಗಾರಿಗಳನ್ನು ಪ್ರಾರಂಭಿಸಿಲ್ಲದ ಕಾರಣ, ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

(ಇ) ಉದ್ಭವಿಸುವುದಿಲ್ಲ.

ವಿಶೇಷ ಘಟಕ ಯೋಜನೆಯಡಿ ಮಂಜೂರು ಮಾಡಿರುವ ಅನುದಾನ

388(253) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) ಮಾನ್ಯ ಜಲ ಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ)ಸಿಂಧನೂರು ತಾಲ್ಲೂಕಿಗೆ ತುಂಗಭದ್ರಾ ಎಡದಂಡೆ ಕಾಲುವೆಗಳ ಅಭಿವೃದ್ಧಿಗೆ ವಿಶೇಷ ಘಟಕ ಯೋಜನೆಯಡಿ ಮಂಜೂರು ಮಾಡಿರುವ ಅನುದಾನದ ಮೊತ್ತವೆಷ್ಟು?

(ಆ) ಸಿಂಧನೂರು ತಾಲ್ಲೂಕಿಗೆ ಗಿರಿಜನ ಉಪಯೋಜನೆ ಕಾರ್ಯಕ್ರಮಗಳ ಅಡಿ 2011–12ನೇ ಸಾಲಿನಲ್ಲಿ ಮಂಜೂರು ಮಾಡಲಾಗಿರುವ ಅನುದಾನದ ಮೊತ್ತವೆಷ್ಟು;

(ಇ) ಈ ಎರಡು ಯೋಜನೆಗಳಿಗೆ ಅನುದಾನ ಬಿಡುಗಡೆಯಾಗಿದ್ದಾಗ್ಯೂ ಸಹ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

(ಈ) ಹಾಗಿದ್ದಲ್ಲಿ, ವಿಳಂಬವಾಗಲು ಕಾರಣಗಳೇನು (ಪೂರ್ಣ ಮಾಹಿತಿ ನೀಡುವುದು)?

ಶ್ರೀಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

(ಅ) 2011–12ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಮಂಜೂರು ಮಾಡಲಾದ ವಿಶೇಷ ಘಟಕ ಯೋಜನೆ ಕಾರ್ಯಕ್ರಮದ ಮೊತ್ತ ರೂ. 395.00 ಲಕ್ಷ.

(ಆ) 2011–12ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಮಂಜೂರು ಮಾಡಲಾದ ಗಿರಿಜನ ಉಪಯೋಜನೆ ಕಾರ್ಯಕ್ರಮದ ಮೊತ್ತ ರೂ. 320.00 ಲಕ್ಷ.

(ಇ) ಪ್ರಸಕ್ತ ಸಾಲಿನಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಕಾರ್ಯಕ್ರಮದಡಿ ಕಾಮಗಾರಿಗಳಿಗೆ ಮಂಜೂರಾತಿ ನೀಡಲಾಗಿದ್ದು, ಕಾಮಗಾರಿಗಳ ಫಲಾನುಭವಿಗಳನ್ನು ಗುರುತಿಸುವುದು, ಅಂದಾಜು ಪಟ್ಟಿ ಸಿದ್ಧಪಡಿಸುವುದು, ತಾಂತ್ರಿಕ ಮಂಜೂರಾತಿ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ.

(ಈ) ಮೇಲಿನಂತೆ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೃಹತ್ ಮತ್ತು ಉದ್ಯಮ

390(812) ಶ್ರೀ ನಂಜುಂಡಸ್ವಾಮಿ ಜಿ.ಎನ್. (ಕೊಳ್ಳೇಗಾಲ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯನ್ನು ಹಿಂದುಳಿದ ಜಿಲ್ಲೆ ಎಂದು ಪರಿಗಣಿಸಲಾಗಿದೆಯೇ;